## ಸಣ್ಣ ಸುದ್ದಿ



ತುಮಕೂರು: ನಗರದ ಶ್ರೀ ಶಿವಾನಂದ ಪ್ರೌಢಶಾಲೆಯ 2010-11 ನೇ ಸಾಲಿನ ಹಳೆಯ ವಿದ್ಯಾರ್ಥಿಗಳು ಗುರುವಂದನ ಕಾರ್ಯಕ್ರಮ ಆಯೋಜಿಸಿ ಕಾರ್ಯಕ್ರಮದಲ್ಲಿ ಶಾಲೆಗೆ ಸ್ಕ್ರೀನ್ ಪ್ರಾಜೆಕ್ಟರ್ ಕೊಡುಗೆಯಾಗಿ ನೀಡಿದರು. ಈ ಸಂದರ್ಭದಲ್ಲಿ ನಿವೃತ್ತ ಮುಖ್ಯ ಉಪಾಧ್ಯಾಯರಾದ ಎನ್. ನರೇಂದ್ರ ನಾಯಕ್ ಹಾಗೂ ಕನ್ನಡ ಶಿಕ್ಷಕ ಸಿ. ಜಗದೀಶ್, ದೈಹಿಕ ಶಿಕ್ಷಕ ಸಿದ್ದಲಿಂಗಪ್ಪ ಅವರನ್ನು ಸನ್ಮಾನಿಸಲಾಯಿತು. ಶಾಲೆಯ ಎಲ್ಲಾ ಶಿಕ್ಷಕರು ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು

# ವಿದ್ಯಾನಿಧಿಯಿಂದ ಎಸ್ ಎಸ್ ಎಲ್ ಸಿ ವಿದ್ಯಾರ್ಥಿ ಮಿತ್ರ ಬಿಡುಗಡೆ



ಸೂರ್ಯಪ್ರಗತಿನ್ಯೂಸ್.ಕಾಂ

ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳಿಗೆ ಪರೀಕ್ಷಾ ಸಿದ್ಧತೆಗೆ ಅನುಕೂಲವಾಗಲೆಂದು ವಿದ್ಯಾನಿಧಿ ಕಾಲೇಜು ವತಿಯಿಂದ ನೀಡುತ್ತಿರುವ ಗಣಿತ ಮತ್ತು ವಿಜ್ಞಾನ ಮಾರ್ಗದರ್ಶಿ ' ವಿದ್ಯಾರ್ಥಿ ಮಿತ್ರ ' ವನ್ನು ವಿದ್ಯಾವಾಹಿನಿ ಗ್ರೂಪ್ ನ, ಕಾರ್ಯದರ್ಶಿ ಎನ್.ಬಿ. ಪ್ರದೀಪ್ ಕುಮಾರ್ ಬಿಡುಗಡೆಗೊಳಿಸಿದರು. ವಿದ್ಯಾರ್ಥಿಮಿತ್ರವು ಹತ್ತನೇ ತರಗತಿ ವಿದ್ಯಾರ್ಥಿಗಳಿಗೆ ಅತ್ಯುತ್ತಮ ಅಂಕ ಗಳಿಸಲು ಬಹಳ ನೆರವಾಗುತ್ತದೆ ಎಂಬುದಕ್ಕೆ ಈ ಹಿಂದಿನ ಫಲಿತಾಂಶಗಳೇ ಸಾಕ್ಷಿ. ಸಂಸ್ಥೆ ನಡೆಸುವ ವಿ-ಮಾಸ್ಟರ್ ಮೈಂಡ್ ಸ್ಕಾಲರ್ಷಿಪ್ ಪರೀಕ್ಷೆಯಲ್ಲಿ ಮೊದಲಿಗರಾಗುವ ಮಕ್ಕಳೇ ತಮ್ಮ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿಯೂ ಜಿಲ್ಲೆಗೆ ಪ್ರಥಮಸ್ಥಾನ ಪಡೆಯುತ್ತಿದ್ದಾರೆ ಎಂದು ಪ್ರದೀಪ್ ಕುಮಾರ್ ಹೇಳಿದರು. ವಿಜ್ಞಾನ ಮತ್ತು ಗಣಿತ ವಿಷಯಗಳಿಗೆ ಸಂಬಂಧಿಸಿದಂತೆ ಪ್ರತಿಯೊಂದು ಅಧ್ಯಾಯದಿಂದಲೂ ಸಂಭಾವ್ಯ ಪ್ರಶ್ನೆಗಳು ಮತ್ತು ಮಾದರಿ ಪ್ರಶ್ನೆಪತ್ರಿಕೆಗಳು ಈ ಪುಸ್ತಕದಲ್ಲಿವೆ. ಪರಿಣಿತರಿಂದ ರೂಪಿಸಲ್ಪಟ್ಟಿರುವ ಈ ಪುಸ್ತಕವು ಹತ್ತನೆಯ ತರಗತಿ ವಿದ್ಯಾರ್ಥಿಗಳಿಗೆ ಉಚಿತವಾಗಿ ಲಭ್ಯವಿದ್ದು, ಆಸಕ್ತ ವಿದ್ಯಾರ್ಥಿಗಳು ವಿದ್ಯಾನಿಧಿ ಕಾಲೇಜಿಗೆ ಭೇಟಿಕೊಟ್ಟು ಪಡೆದುಕೊಳ್ಳಬಹುದು. ಹೆಚ್ಚಿನ ಮಾಹಿತಿಗೆ ಮೊಬೈಲ್ ಸಂಖ್ಯೆ 7019781264, 9844857419 ನ್ನು ಸಂಪರ್ಕಿಸಬಹುದು.

ಪ್ರೀತಿಯ ನೆಚ್ಚಿನ ಓದುಗ ಮಿತ್ರರೇ ಸೂರ್ಯಪ್ರಗತಿ ಕನ್ನಡ ದಿನಪತ್ರಿಕೆಯು ಮಾಧ್ಯಮ ಪಟ್ಟಿಗೆ ಸೇರಿ ಪ್ರತಿ ನಿತ್ಯ ಸ್ಥಳೀಯ ಸುದ್ದಿಗಳ ಜೀವಾಳವಾಗಿದ್ದು ಕ್ಷಣ ಕ್ಷಣದ ಸುದ್ದಿಗಳನ್ನ ಅಂತರ್ಜಾಲ ತಾಣ ವೆಬ್ ಆವೃತ್ತಿ https://suryapragathi.com ನಲ್ಲಿ ಹಾಗೂ https://epaper.suryapragathi.com ನಲ್ಲಿ ಓದಬಹುದು - ನೋಡಬಹುದು ಹೆಚ್ಚಿನ ಮಾಹಿತಿಗಾಗಿ 9901010109

# ಕಬಡ್ಡಿ ಭಾರತದಿಂದ ಹುಟ್ಟಿಕೊಂಡ ಸಾಂಪ್ರದಾಯಿಕ ಕ್ರೀಡೆ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಇತ್ತೀಚಿನ ದಿನಗಳಲ್ಲಿ ಪ್ರತಿಯೊಬ್ಬ ವಿದ್ಯಾರ್ಥಿಯೂ ಕ್ರೀಡಾ ಮನೋಭಾವವನ್ನು ಬೆಳೆಸಿಕೊಳ್ಳಬೇಕು. ಸರ್ಕಾರ ಹಾಗೂ ವಿವಿಧ ಶಿಕ್ಷಣ ಸಂಸ್ಥೆಗಳು ಕ್ರೀಡೆಗಳಿಗೆ ಹೆಚ್ಚಿನ ಪ್ರೋತ್ಸಾಹ ನೀಡುತ್ತಿದ್ದು, ಕಬಡ್ಡಿಯೂ ಅಂತರರಾಷ್ಟ್ರೀಯ ಮಟ್ಟದಲ್ಲಿ ತನ್ನದೇ ಆದ ಸ್ಥಾನವನ್ನುಗಳಿಸಿದೆ. ಶಿಕ್ಷಣ ಸಂಸ್ಥೆಗಳು ಕ್ರೀಡಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳುತ್ತಿರುವುದು ಉತ್ತಮ ಬೆಳವಣಿಗೆಯಾಗಿದೆ ಎಂದು ಶ್ರೀದೇವಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಡಾ.ಎಂ.ಆರ್. ಹುಲಿನಾಯ್ಕರ್‌ರವರು ತಿಳಿಸಿದರು.

ನಗರದ ಶಿರಾರಸ್ತೆಯ ಶ್ರೀದೇವಿ ಫಿಸಿಯೋಥೆರಪಿ ಕಾಲೇಜಿನ ವತಿಯಿಂದ ಆರ್‌ಜಿಯುಹೆಚ್‌ಎಸ್ ಬೆಂಗಳೂರು ಉತ್ತರ ವಲಯ ಪುರುಷರ ಕಬ್ಬಡಿ ಪಂದ್ಯಾವಳಿಯನ್ನು ಕಾಲೇಜಿನ ಆವರಣದಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿದ್ದ ಡಾ.ಎಂ. ಆರ್.ಹುಲಿನಾಯ್ಕರ್‌ರವರು ಮಾತನಾಡುತ್ತಾ ಕಬಡ್ಡಿ ಭಾರತೀಯರ ಹೆಮ್ಮೆಯ ಕ್ರೀಡೆಯಾಗಿದೆ. ಸಾವಿರಾರು ವರ್ಷಗಳ ಇತಿಹಾಸ ಹೊಂದಿರುವ ಈ ಗ್ರಾಮೀಣ ಕ್ರೀಡೆ ಇಂದು ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಹೆಸರು ಮಾಡುತ್ತಿದೆ. ವಿಶೇಷವಾಗಿ ಫಿಸಿಯೋಥೆರಪಿ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳು ಕ್ರೀಡಾಪಟುಗಳಿಗೆ ಗಾಯಗಳ ಸಂದರ್ಭದಲ್ಲಿ ಸೂಕ್ತ ಮಾರ್ಗದರ್ಶನ ಹಾಗೂ ಚಿಕಿತ್ಸಾ ನೆರವು ನೀಡುವಲ್ಲಿ ಪ್ರಮುಖ ಪಾತ್ರ ವಹಿಸಬಹುದು. ಕ್ರೀಡಾ ಗಾಯಗಳನ್ನು ತಡೆಗಟ್ಟಲು ಮತ್ತು ಉತ್ತಮ ದೈಹಿಕ ನಿರ್ವಹಣೆಗೆ ಸರಿಯಾದ ಮಾರ್ಗದರ್ಶನ ಅಗತ್ಯವಿದೆ ಎಂದರು. ಕಬಡ್ಡಿ ಭಾರತದಿಂದ ಹುಟ್ಟಿಕೊಂಡ ಸಾಂಪ್ರದಾಯಿಕ ಕ್ರೀಡೆಯಾಗಿದ್ದು, ಗ್ರಾಮೀಣ ಪ್ರದೇಶಗಳಲ್ಲಿ ಅತ್ಯಂತ ಜನಪ್ರಿಯವಾಗಿದೆ. ಕಬಡ್ಡಿ ಆಟವಾಡಲು ಮೈದಾನ ಮತ್ತು ಮೂಲಭೂತ ವ್ಯವಸ್ಥೆಗಳಿದ್ದರೂ ಆಟವಾಡಬಹುದು. ಉತ್ತಮ ದೈಹಿಕ ಸಾಮರ್ಥ್ಯ ಹಾಗೂ ಕ್ರೀಡೆಯ ಬಗ್ಗೆ ಆಸಕ್ತಿಯನ್ನು ಹೊಂದಿದ್ದರೆ ಯಾರೂ ಬೇಕಾದರೂ ಕಬ್ಬಡಿ ಪಂದ್ಯಾವಳಿಯಲ್ಲಿ ಭಾಗವಹಿಸಬಹುದು ಎಂದರು. ವಿದ್ಯಾರ್ಥಿಗಳು ತಮ್ಮ ಪ್ರತಿಭೆ ಹಾಗೂ ಕೌಶಲ್ಯವನ್ನು ಬೆಳೆಸಿಕೊಳ್ಳಲು ಉತ್ತಮ



ವೇದಿಕೆಯಾಗಲಿ ಎಂದರು. ಬೆಂಗಳೂರು ಉತ್ತರ ವಲಯದ ಪುರುಷರ ಕಬಡ್ಡಿ ಪಂದ್ಯಾವಳಿ 2026-27ರಲ್ಲಿ ಉತ್ತರ ವಲಯದ 17ಕ್ಕೂ ಹೆಚ್ಚು ಕಾಲೇಜುಗಳು ಭಾಗವಹಿಸಿರುವುದು ಸಂತಸದ ಸಂಗತಿ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯಅತಿಥಿಯಾಗಿ ತುಮಕೂರು ಜಿಲ್ಲಾ ಅಮಟೂರು ಕಬ್ಬಡಿ ಸಂಘದ ಅಧ್ಯಕ್ಷರಾದ ಕೆ.ಆರ್.ರವೀಂದ್ರ ಮಾತನಾಡಿ, ಕಬಡ್ಡಿ ಆಟಗಾರರು ಕ್ರೀಡೆಯಲ್ಲಿ ಸಾಧನೆ ಮಾಡುವುದರ ಜೊತೆಗೆ ಉತ್ತಮ ಶಿಕ್ಷಣ ಪಡೆಯಲು ಅವಕಾಶ ಕಲ್ಪಿಸಬೇಕು. ಕಬಡ್ಡಿ ಆಟವಾಡಲು ಉತ್ತಮ ವೇದಿಕೆಯಾಗಿದೆ. ಗ್ರಾಮೀಣ ಹಾಗೂ ಬಡ ಕುಟುಂಬಗಳ ವಿದ್ಯಾರ್ಥಿಗಳಿಗೆ ಮೆಡಿಕಲ್ ಕಾಲೇಜು ಸೇರಿದಂತೆ ಉನ್ನತ ಶಿಕ್ಷಣ ಪಡೆಯುವುದು ಸುಲಭದ ಮಾತಲ್ಲ. ಕ್ರೀಡೆಯಲ್ಲಿ ತೊಡಗಿಸಿಕೊಂಡಿರುವ ವಿದ್ಯಾರ್ಥಿಗಳಿಗೆ ಸೂಕ್ತ ಅವಕಾಶ ಮತ್ತು ಪ್ರೋತ್ಸಾಹ ದೊರೆತರೆ ಅವರು ಕ್ರೀಡೆಯಲ್ಲಿಯೂ, ಶಿಕ್ಷಣದಲ್ಲಿಯೂ ಉತ್ತಮ ಸಾಧನೆ ಮಾಡಬಹುದು.

# ಸೆ.18ರಂದು ಪಿ.ಆರ್.ತಿಪ್ಪೇಸ್ವಾಮಿ ಸಮಗ್ರ ಸಾಹಿತ್ಯ ಸಂಪುಟಗಳ ಲೋಕಾರ್ಪಣೆ ಸಮಾರಂಭ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಕನ್ನಡ ಪುಸ್ತಕ ಪ್ರಾಧಿಕಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಶ್ರೀದೇವಿ ಸಮೂಹ ವಿದ್ಯಾ ಸಂಸ್ಥೆಗಳ ಸಹಯೋಗದಲ್ಲಿ ಸೆಪ್ಟೆಂಬರ್ 18ರಂದು ಬೆಳಗ್ಗೆ 11.30 ಗಂಟೆಗೆ ನಗರದ ಶಿರಾ ರಸ್ತೆ ಶ್ರೀದೇವಿ ಇಂಜಿನಿಯರಿಂಗ್ ಕಾಲೇಜು ಆಡಿಟೋರಿಯಂನಲ್ಲಿ "ಪಿ.ಆರ್. ತಿಪ್ಪೇಸ್ವಾಮಿ ಸಮಗ್ರ ಸಾಹಿತ್ಯ ಸಂಪುಟಗಳ ಲೋಕಾರ್ಪಣೆ ಸಮಾರಂಭ"ವನ್ನು ಏರ್ಪಡಿಸಲಾಗಿದೆ.

ಸಮಾರಂಭವನ್ನು ಉಪ ಮುಖ್ಯಮಂತ್ರಿ ಹಾಗೂ ಕಂದಾಯ, ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆ ಸಚಿವ ಡಾ: ಜಿ. ಪರಮೇಶ್ವರ ಉದ್ಘಾಟಿಸುವರು. ನಿಕಟಪೂರ್ವ ಮುಖ್ಯಮಂತ್ರಿ ಸಿದ್ದರಾಮಯ್ಯ ಸಮಗ್ರ ಸಂಪುಟಗಳ ಲೋಕಾರ್ಪಣೆ ಹಾಗೂ ಪಿ.ಆರ್.ಟಿ. ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡುವರು. ನಗರ ಶಾಸಕ ಜಿ.ಬಿ. ಜ್ಯೋತಿಗಣೇಶ್ ಅಧ್ಯಕ್ಷತೆವಹಿಸುವರು. ಕಾರ್ಯಕ್ರಮದಲ್ಲಿ ವಿವಿಧ ಜನಪ್ರತಿನಿಧಿಗಳು, ಅಧಿಕಾರಿಗಳು ಭಾಗವಹಿಸುವರು.

# ಪಾವಗಡದಲ್ಲಿ ಮಾದರ ಮಹಾಸಭಾ ಸಭೆ: ಶೀಘ್ರದಲ್ಲೇ ಪ್ರತಿಭಾ ಪುರಸ್ಕಾರಕ್ಕೆ ನಿರ್ಧಾರ

ಸೂರ್ಯಪ್ರಗತಿನ್ಯೂಸ್.ಕಾಂ

ಪಾವಗಡ,: ಪಾವಗಡ ತಾಲ್ಲೂಕು ಮಾದರ ಮಹಾಸಭಾ ವತಿಯಿಂದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದ ದಿನಾಂಕ ನಿಗದಿ ಹಾಗೂ ಸದಸ್ಯತ್ವ ನೋಂದಣಿ ಕುರಿತು ಪೂರ್ವಭಾವಿ ಸಭೆಯು ಇಂದು ನಗರದಲ್ಲಿ ನಡೆಯಿತು. ಸಭೆಯನ್ನು ಉದ್ದೇಶಿಸಿ ಮಾತನಾಡಿದ ನಿವೃತ್ತ ಪ್ರಾಂಶುಪಾಲ ಬಸವಲಿಂಗಪ್ಪ ಅವರು, "ಭಾರತದ ವಿದ್ಯಾಭ್ಯಾಸ ಇಡೀ ಪ್ರಪಂಚಕ್ಕೆ ಮಾದರಿಯಾಗಿದೆ. ಆದರೆ ನಮ್ಮ ಮಕ್ಕಳಿಗೆ ಸರಿಯಾದ ರೀತಿಯಲ್ಲಿ ಶಿಕ್ಷಣದ ಬಗ್ಗೆ ಮುನ್ನೋಟ ಮತ್ತು ಮಾರ್ಗದರ್ಶನ ನೀಡಬೇಕಿದೆ" ಎಂದು ಹೇಳಿದರು. "ಮಾದಿಗ ಜಾತಿ ಎಂದರೆ ಕರುಣಾಮಯಿ ಜಾತಿ. ನಾವು ಎಲ್ಲರೂ ಸಂಘಟಿತರಾಗಬೇಕು. ರಾಮಾಯಣ, ಮಹಾಭಾರತ ಎರಡೂ ಯುಗಗಳಲ್ಲೂ ನಮ್ಮ ಜಾತಿಯ ಹೆಸರಿದೆ, ಜಾಂಬವಂತರ ಇತಿಹಾಸವಿರುವ ನಮ್ಮ ಸಮುದಾಯದಲ್ಲಿ ಇಂದು ಅಸೂಯೆ, ದ್ವೇಷ ತುಂಬಿ ತುಳುಕುತ್ತಿದೆ. ಅದನ್ನೆಲ್ಲ ಬಿಟ್ಟು ನಾವೆಲ್ಲ ಒಂದಾಗಿ ಸಂಘಟನೆ ಕಟ್ಟಬೇಕು. ದೇಶದಲ್ಲಿ ರಾಜಕೀಯವಾಗಿ, ಶೈಕ್ಷಣಿಕವಾಗಿ ಮತ್ತು ಆರ್ಥಿಕವಾಗಿ ನಾವು ಒಗ್ಗಟ್ಟಿನಿಂದ ಇದ್ದರೆ ಮಾತ್ರ ಅಭಿವೃದ್ಧಿ ಸಾಧ್ಯ" ಎಂದು ಕರೆ ನೀಡಿದರು.ನಂತರ ಮಾತನಾಡಿದ ಮಾದರ ಮಹಾಸಭಾ ತಾಲ್ಲೂಕು ಅಧ್ಯಕ್ಷ ನರಸಿಂಹಪ್ಪ ಅವರು, "ಮುಂದಿನ ಒಂದು ತಿಂಗಳ ಒಳಗೆ ತಾಲ್ಲೂಕು ಮಟ್ಟದ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಆಯೋಜಿಸಬೇಕು" ಎಂದು ಸಭೆಗೆ ಮನವಿ ಮಾಡಿದರು. ಈ ಕಾರ್ಯಕ್ರಮದಲ್ಲಿ ಖಖಖಐಅ, ಕಗಐಅ ಮತ್ತು ಪದವಿಯಲ್ಲಿ ಹೆಚ್ಚು ಅಂಕ ಪಡೆದ ಮಾದಿಗ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಲು ತೀರ್ಮಾನಿಸಲಾಯಿತು. ಸಭೆಯಲ್ಲಿ ಮಾದರ ಮಹಾಸಭಾ ಪದಾಧಿಕಾರಿಗಳು, ವಿವಿಧ ದಲಿತ ಸಂಘಟನೆಗಳ ಮುಖಂಡರು, ನಿವೃತ್ತ ಅಧಿಕಾರಿಗಳು ಹಾಗೂ ಸಮುದಾಯದ ಹಿರಿಯರು ಭಾಗವಹಿಸಿದ್ದರು.

# ಒಂದೂವರೆ ತಿಂಗಳಿಂದ ಕೆರೆಯಲ್ಲಿ ಹೂಳೆತ್ತುವ ಕಾಮಗಾರಿ 150 ಕೂಲಿ ಕಾರ್ಮಿಕರಿಗೆ ಬಿಡುಗಡೆಯಾಗದ ಕೂಲಿ ಹಣ

ಸೂರ್ಯಪ್ರಗತಿನ್ಯೂಸ್.ಕಾಂ

ಪಾವಗಡ ರಂಗಸಮುದ್ರ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿಬಿಜಿ ರಾಮಾ ಜಿ ಯೋಜನೆಯಡಿ ಶ್ರೀ ಗುರು ತಿಪ್ಪೇರುದ್ರಸ್ವಾಮಿ ಕೆರೆಯಲ್ಲಿ ಹೂಳೆತ್ತುವ ಕಾಮಗಾರಿ ನಿರ್ವಹಿಸಿದ 150 ಕೂಲಿ ಕಾರ್ಮಿಕರಿಗೆ ಕಳೆದ 5 ವಾರಗಳಿಂದ ಕೂಲಿ ಹಣ ನೀಡಿಲ್ಲ.

ರಂಗಸಮುದ್ರ ಗ್ರಾಪಂ ವ್ಯಾಪ್ತಿಯ ಓಬಳಾಪುರ, ಕರನಾಗನಹಟ್ಟಿ ಹಾಗೂ ರಂಗಸಮುದ್ರ ಗ್ರಾಮದ ಕಾರ್ಮಿಕರು ಕಳೆದ ಒಂದೂವರೆ ತಿಂಗಳಿಂದ ಕೆರೆಯಲ್ಲಿ ಹೂಳೆತ್ತುವ ಕಾಮಗಾರಿ ಮಾಡುತ್ತಿದ್ದಾರೆ. ಆದರೆ, ಯಾರೊಬ್ಬರ ಕೂಲಿ ಸುಮಾರು 18 ಲಕ್ಷ ರೂ. ಕೂಲಿ ದೂರಿತ್ತರೂ ಖಾತೆಗೂ ಹಣ ಜಮೆಯಾಗಿಲ್ಲ. ಸಿಗದ ಪರಿಹಾರ ಹಣ ಬಾಕಿ ಇದೆ ಎಂದು ಕಾರ್ಮಿಕರು ಆಕ್ರೋಶ ಗೊಂಡಿದ್ದಾರೆ. ಕಾರ್ಮಿಕರ ಕೆಲಸದ ಏಜೆಟಂರ್ ತೆಗೆದುಕೊಳ್ಳಲಾಗಿದ್ದು; ಎಫ್‌ಟಿಓ ಮಾಡದೆ ಇರುವ ಕಾರಣ ಹಣ ಬಿಡುಗಡೆಯಾಗಿಲ್ಲ ಎಂದು ಆರೋಪಿಸಲಾಗಿದೆ. ಈ ಬಾರಿ ಮುಂಗಾರು ಕೈಕೊಟ್ಟ ಪರಿಣಾಮ ಕೊಳವೆ ಬಾವಿಗಳು ಬತ್ತಿದ್ದು, ಕೃಷಿ ಕೆಲಸವೂ ದೊರೆಯುತ್ತಿಲ್ಲ. ಮಕ್ಕಳ ವಿದ್ಯಾಭ್ಯಾಸ ಸೇರಿ ಕುಟುಂಬದ ಅಗತ್ಯಗಳಿಗಾಗಿ ಧರ್ಮಸ್ಥಳ, ಮೈಕ್ರೋ ಫೈನಾನ್ಸ್ ಸೇರಿ ಎನ್ ವಿವದ ಸಂಘ-ಸಂಸ್ಥೆಗಳಿಂದ ಸಾಲ ಪಡೆದಿರುವ ಕಾರ್ಮಿಕರು, ಸಾಲ ತೀರಿಸಲು ಕೆಲಸದ ನಿರೀಕ್ಷೆಯಲ್ಲಿ ಕೆರೆಯಲ್ಲಿ ಹೂಳೆತ್ತುವ ಕಾಮಗಾರಿ ಮಾಡುತ್ತಿದ್ದಾರೆ. ಆದರೆ ಒಂದೂವರೆ ತಿಂಗಳಿಂದ ಕೂಲಿ ಸಿಗದಿರುವುದರಿಂದ ಜೀವನ ನಿರ್ವಹಣೆ ಕಷ್ಟವಾಗಿದೆ ಎಂದು ಅಳಲು ತೋಡಿಕೊಂಡಿದ್ದಾರೆ. ಗುರು ತಿಪ್ಪೇರುದ್ರಸ್ವಾಮಿ ಕೆರೆಯಲ್ಲಿ ಕೆಲಸ



ಮಾಡುತ್ತಿರುವ ಕಾರ್ಮಿಕರು, ಪಿಡಿಒ, ಎಡಿ ವಿರುದ್ಧ ನಿರ್ಲಕ್ಷ್ಯದ ಆರೋಪ ಕಾಮಗಾರಿ ವೇಳೆ ಗ್ರಾಪಂ ಪಿಡಿಒ ಚಿಕ್ಕಣ್ಣ ಹಾಗೂ ಎಡಿ ಮಾರುತಿ ಪ್ರಸಾದ್ ಸ್ಥಳಕ್ಕೆ ಭೇಟಿ ನೀಡಿ ಫೋಟೋ ತೆಗೆದುಕೊಂಡು ಇಲಾಖೆಗೆ ವರದಿ ಸಲ್ಲಿಸಿದ್ದಾರೆ.



ಆದರೆ ಇದುವರೆಗೆ ಕೂಲಿ ಬಿಡುಗಡೆಯಾಗಿಲ್ಲ. ಈ ಬಗ್ಗೆ ಪಿಡಿಒ ಅವರನ್ನು ಕೇಳಿದರೆ ಸಮರ್ಪಕವಾಗಿ ಸ್ಪಂದಿಸುತ್ತಿಲ್ಲ. ಕೂಲಿ ಬಿಡುಗಡೆ ಮಾಡದಂತೆ ಸ್ಥಳೀಯ ಪ್ರಭಾವಿ ಮುಖಂಡರು ಪಿಡಿಒ ಮೇಲೆ ಒತ್ತಡ ಹೇರುತ್ತಿದ್ದಾರೆ. ಅಧಿಕಾರಿಗಳು ಕಾರ್ಮಿಕರ ಸಮಸ್ಯೆಗಿಂತ ಮುಖಂಡರ ಮಾತಿಗೆ ಮನ್ನಣೆ ನೀಡುತ್ತಿರುವುದರಿಂದ ಹಣ ಬಿಡುಗಡೆಯಾಗುತ್ತಿಲ್ಲ ಎಂಬುದು ಕಾರ್ಮಿಕರ ಆರೋಪ.

ಜಿಲ್ಲಾಧಿಕಾರಿಗೆ ದೂರು ಕೊಟ್ಟರು ಹಣ ಬಿಡುಗಡೆ ಮಾಡುವಂತಾಯಿಲ್ಲ ಕಳೆದ ಒಂದು ವಾರದಿಂದ ಕಾರ್ಮಿಕರು ಜಿಲ್ಲಾ ಪಂಚಾಯಿತಿ ಸಿಇಒ ಹಾಗೂ ಜಿಲ್ಲಾಧಿಕಾರಿಗಳಿಗೆ ಫೋಟೊ, ವಿಡಿಯೊಗಳನ್ನು ವಾಟ್ಸಾಪ್ ಮೂಲಕ ಕಳುಹಿಸಿ ದೂರು ನೀಡಿದ್ದಾರೆ. ಆದರೆ ಇದುವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ. ರಂಗಸಮುದ್ರ ನೂರಾರು ಕೂಲಿ ಕಾರ್ಮಿಕರು ಕೆಲಸ ಮಾಡಿದ್ದರೂ, ಶ್ರಮಕ್ಕೆ ತಕ್ಕ ಫಲ ಸಿಗುತ್ತಿಲ್ಲ. ಬಿಸಿಲಿನಲ್ಲಿ ಕಾರ್ಮಿಕರು ದುಡಿದರೆ, ಅಧಿಕಾರಿಗಳ ನಿರ್ಲಕ್ಷ್ಯದಿಂದ ಮಾನಸಿಕ ಹಿಂಸೆ ಅನುಭವಿಸುವಂತಾಗಿದೆ. ಜಿಲ್ಲಾಡಳಿತ ಕೂಡಲೇ ಎಚ್ಚೆತ್ತು ಬಾಕಿ ಕೂಲಿ ಹಣ ಬಿಡುಗಡೆ ಮಾಡಬೇಕು. ಗೋಪಿ ನಾಯಕ, ತಾಲೂಕು ಪ್ರತಿನಿಧಿ, ಗ್ರಾಮೀಣ ಕೂಲಿ ಕಾರ್ಮಿಕರ ಸಂಘ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಆಗ್ರಹ ಹಬ್ಬದ ಸಂದರ್ಭದಲ್ಲಿ ಕೂಲಿ ಹಣ ಸಿಗದೆ 150 ಕುಟುಂಬಗಳು ಜೀವನ ಸಾಗಿಸಲು ಪರದಾಡಿವೆ. ಸಾಲ ಪಡೆದ ಸಂಘಗಳಿಗೆ ಹಣ ಪಾವತಿಸಲಾಗದೆ ಕುಟುಂಬಗಳು ಮಾನಸಿಕ ಒತ್ತಡಕ್ಕೆ ಒಳಗಾಗಿವೆ. ಜಿಲ್ಲಾಡಳಿತ ಕೂಡಲೇ ಮಧ್ಯಪ್ರವೇಶಿಸಿ ಬಾಕಿ ಇರುವ 18 ಲಕ್ಷ ರೂ. ಕೂಲಿ ಹಣವನ್ನು ಕಾರ್ಮಿಕರ ಖಾತೆಗಳಿಗೆ ಬಿಡುಗಡೆ ಮಾಡಬೇಕು. ಅಲ್ಲದೆ ನಿರ್ಲಕ್ಷ್ಯ ತೋರಿದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಕಾರ್ಮಿಕರು ಆಗ್ರಹಿಸಿದ್ದಾರೆ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

# 3 ತಿಂಗಳಲ್ಲಿ 6ನೇ ಹುದ್ದೆ ಪಡೆದ ಐಎಎಸ್ ಅಧಿಕಾರಿ

ಬೆಂಗಳೂರು: ಕರ್ನಾಟಕ ಐಎಎಸ್ ಅಧಿಕಾರಿ ಯಲನಗೌಡ ಶಿವನಗೌಡ ಪಾಟೀಲ ಅವರಿಗೆ ಮೂರೇ ತಿಂಗಳಲ್ಲಿ ಆರನೇ ಹುದ್ದೆಯನ್ನು ರಾಜ್ಯ ಸರ್ಕಾರ ನೀಡಿದೆ. ಇದರಲ್ಲಿ ಮೂರು ಹುದ್ದೆಗಳು ಬದಲಾಗಿದ್ದು, ಈಗ ಮೂರು ಹುದ್ದೆಗಳಲ್ಲಿ ಕಾರ್ಯನಿರ್ವಹಿಸಲಿದ್ದಾರೆ.

2012ನೇ ಬ್ಯಾಚ್‌ನ ಐಎಎಸ್ ಅಧಿಕಾರಿಯಾಗಿರುವ ಪಾಟೀಲ ಅವರು ಕಳೆದ ಮೂರು ವರ್ಷ ಕರ್ನಾಟಕ ಕೃಷಿ ಇಲಾಖೆ ಆಯುಕ್ತರಾಗಿ ಕಾರ್ಯನಿರ್ವಹಿಸಿದ್ದರು.

ಜೂನ್ ತಿಂಗಳಲ್ಲಿ ಅವರನ್ನು ವರ್ಗಾವಣೆ ಮಾಡಿ ಕರ್ನಾಟಕ ಆರೋಗ್ಯ ಟ್ರಸ್ಟ್ ಕಾರ್ಯನಿರ್ವಾಹಕ ನಿರ್ದೇಶಕರ ಹುದ್ದೆಗೆ ನೇಮಿಸಲಾಗಿತ್ತು.

ಜುಲೈ 21ರಂದು ಕರ್ನಾಟಕ ರಾಜ್ಯ ಕೌಶಲ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ವೃತ್ತಿ ಪರ ತರಬೇತಿ ಹಾಗೂ ಕೌಶಲ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರ ಎರಡು ಹುದ್ದೆಗಳನ್ನು ಹೆಚ್ಚುವರಿಯಾಗಿ ನೀಡಲಾಗಿತ್ತು.ಆಗಸ್ಟ್ 31ರಂದು ಕರ್ನಾಟಕ ರಾಜ್ಯ ಕೌಶಲ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ವೃತ್ತಿ ಪರ ತರಬೇತಿ ಹಾಗೂ ಕೌಶಲ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರ ಎರಡು ಹುದ್ದೆಗಳ ಹೆಚ್ಚುವರಿ ಹುದ್ದೆಯಿಂದ ಬಿಡುಗಡೆ ಮಾಡಿ ಅವರಿಗೆ ಸಣ್ಣ, ಅತಿ ಸಣ್ಣ ಹಾಗೂ ಸೂಕ್ಷ್ಮ ಕೈಗಾರಿಕೆಗಳ ನಿರ್ದೇಶಕರ ಹುದ್ದೆಗೆ ನೇಮಕ ಮಾಡಲಾಗಿತ್ತು. ಈಗ ಅವರು ಎರಡು ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ.

ಇದರ ನಡುವೆ ಮಂಗಳವಾರ ಹೊರಡಿಸಿರುವ ಆದೇಶದ ಪ್ರಕಾರ ವೈ ಎಸ್.ಪಾಟೀಲ ಅವರಿಗೆ ಕರ್ನಾಟಕ ರೇಷ್ಮೆ ಮಾರುಕಟ್ಟೆ ನಿಗಮ( ಏಖಐಅ) ವ್ಯವಸ್ಥಾಪಕ ನಿರ್ದೇಶಕರ ಹುದ್ದೆಗೆ ಹೆಚ್ಚುವರಿಯಾಗಿ ನೇಮಿಸಲಾಗಿದೆ. ಇದರೊಂದಿಗೆ ಮತ್ತೆ ಮೂರು ಹುದ್ದೆಗಳನ್ನು ಪಾಟೀಲರು ನಿಭಾಯಿಸಲಿದ್ದಾರೆ. 2026 ರ ಆರಂಭದಲ್ಲಿ ಕೃಷಿ ಇಲಾಖೆ ಆಯುಕ್ತರ ಹುದ್ದೆ ಜೊತೆಗೆ ರಾಷ್ಟ್ರೀಯ ತೋಟಗಾರಿಕೆ ಮಿಷನ್ ನಿರ್ದೇಶಕರ ಹುದ್ದೆಯನ್ನು ವೈ.ಎಸ್.ಪಾಟೀಲ ಅವರಿಗೆ ಹೆಚ್ಚುವರಿಯಾಗಿ ನೀಡಲಾಗಿತ್ತು.

# ಶಶಿಕುಮಾರ್‌ಗೆ ಪಿಎಚ್.ಡಿ ಪದವಿ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಜಿಲ್ಲೆಯ ಗುಬ್ಬಿ ತಾಲೂಕು ದೊಳ್ಳೇನಹಳ್ಳಿ ಗ್ರಾಮದ ಡಿ.ಎನ್. ನಾಗರಾಜು ಮತ್ತು ಹೆಚ್. ಕೆ.ಲಕ್ಷ್ಮೀದೇವಮ್ಮ ಅವರ ಪುತ್ರ ಶಶಿಕುಮಾರ್ ಡಿ.ಎನ್ ಅವರು ಕಠಿಣ ಪರಿಶ್ರಮ ಹಾಗೂ ನಿರಂತರ ಅಧ್ಯಯನದ ಮೂಲಕ ಯುಜಿಸಿ ಫೆಲೋಶಿಪ್‌ನೊಂದಿಗೆ ಮೈಸೂರು ವಿಶ್ವವಿದ್ಯಾನಿಲಯದಿಂದ ಪಿಎಚ್.ಡಿ. ಪದವಿಗೆ ಅರ್ಹತೆ ಪಡೆದಿದ್ದಾರೆ. ಮೈಸೂರು ವಿಶ್ವವಿದ್ಯಾನಿಲಯದ ಸಾರ್ವಜನಿಕ ಆಡಳಿತ ವಿಷಯದಲ್ಲಿ ಸಂಶೋಧನಾ ವಿದ್ಯಾರ್ಥಿಯಾಗಿರುವ ಶಶಿಕುಮಾರ್ ಡಿ.ಎನ್ ಅವರು " ಕರ್ನಾಟಕದ ಜಿಲ್ಲಾ ಆಡಳಿತದ ಮೇಲೆ ಇ-ಆಡಳಿತದ ಪರಿಣಾಮ: ಮೈಸೂರು ಜಿಲ್ಲೆಯ ವಿಶೇಷ ಉಲ್ಲೇಖದೊಂದಿಗೆ ಒಂದು ವಿಶ್ಲೇಷಣೆ " (Impact of E-Governance on District Administration in Karnataka with Special Reference to Mysuru District: An Analysis) ಕುರಿತು ಪಿಎಚ್.ಡಿ. ಸಂಶೋಧನಾ ಪ್ರಬಂಧ ಮಂಡಿಸಿ ಪದವಿಗೆ ಅರ್ಹರಾಗಿದ್ದಾರೆ. ಇಂಗ್ಲಿಷ್ ಭಾಷೆಯಲ್ಲಿ ಸಿದ್ಧಪಡಿಸಲಾಗಿರುವ ಈ ಪ್ರಬಂಧ ಮಂಡನೆಗೆ ಡಾ: ಬಿ.ಎನ್.ಯಶೋಧ ಮಾರ್ಗದರ್ಶಕರಾಗಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

# ಎಕರೆ ಹಿಪ್ಪು ನೇರಳೆ ತೋಟಕ್ಕೆ 300 ಮೊಟ್ಟೆ ಚಾಕಿ ಕಟ್ಟಿ 250 ಕೆಜಿ ರೇಷ್ಮೆ ಗೂಡು, ಬೆಳೆಯಬಹುದು

ಸೂರ್ಯಪ್ರಗತಿನ್ಯೂಸ್.ಕಾಂ



ಮಧುಗಿರಿ ...ಹಿಪ್ಪು ನೇರಳೆ ಬೇಸಾಯದಲ್ಲಿ ಇಲಾಖೆ ಶಿಫಾರಸ್ಸು ಮಾಡಿರುವ ಕೀಟನಾಶಕಗಳನ್ನು ಮಾತ್ರ ಬಳಸಬೇಕು ಎಂದು ರೇಷ್ಮೆ ಇಲಾಖೆಯ ಸಹಾಯಕ ನಿರ್ದೇಶಕ ಮೋಹನ್ ತಿಳಿಸಿದ್ದಾರೆ ತಾಲೂಕಿನ ಪುರವಾರ ಹೋಬಳಿ ದೊಡ್ಡ ಹೊಸಹಳ್ಳಿ ಗ್ರಾಮದಲ್ಲಿ ರೇಷ್ಮೆ ಬೆಳೆಗಾರರಿಗೆ ಹಮ್ಮಿಕೊಂಡಿದ್ದ ನನ್ನ ರೇಷ್ಮೆ ನನ್ನ ಹೆಮ್ಮೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ರೇಷ್ಮೆ ಹುಳು ಸಾಕಾಣಿಕೆ ಮನೆ ನಿರ್ಮಾಣಕ್ಕೂ ಮುನ್ನ ಸದರಿ ಖಾಲಿ ನಿವೇಶನವನ್ನು ದಿಶಾಂಕ್ ಆಪ್ ಮೂಲಕ ಖಚಿತಪಡಿಸಿಕೊಂಡ ನಂತರ ಹುಳು ಮನೆ ನಿರ್ಮಾಣ ತಕದ್ದು ಎಂದು ಹೇಳಿದರು ಪ್ರತಿಯೊಂದು ಎಕರೆ ಹಿಪ್ಪು ನೇರಳೆ ತೋಟಕ್ಕೆ 300 ಮೊಟ್ಟೆ ಚಾಕಿ ಕಟ್ಟಿ 250 ಕೆಜಿ ರೇಷ್ಮೆ ಗೂಡು, ಬೆಳೆಯುಬಹುದು ಎಂದು ತಿಳಿಸಿದರು ರೇಷ್ಮೆ ಮಂಡಳಿಯ ವಿಜ್ಞಾನಿ ಶ್ರೀ ಕಿಶನ್ ಮಾತನಾಡಿ ಹಿಪ್ಪು ನೇರಳೆ ತೋಟಕ್ಕೆ ಭಾದಿಸುವ ನುಸಿ ಮತ್ತು ತಿಪ್ಸ್ ಹತೋಟಿಗೆ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಮಾಹಿತಿ ನೀಡಿದವರು ಹಿಪ್ಪು ನೇರಳೆ ತೋಟದಲ್ಲಿ ಪ್ರಾತ್ಯಕ್ಷತೆ ಮಾಡುವ ಮೂಲಕ ಕೀಟನಾಶಕಗಳ ಬಳಕೆ ಮಣ್ಣು ಪರೀಕ್ಷೆಗೆ ಮಾದರಿ ಮಣ್ಣು ಸಂಗ್ರಹಿಸುವುದರ ಬಗ್ಗೆ ಸಂಪೂರ್ಣ ಮಾಹಿತಿ ನೀಡಿದರು ರೇಷ್ಮೆ ವಿಸ್ತರಣಾಧಿಕಾರಿ ಎಸ್ ಸ್ವಾಮಿ ನಾಯ್ಕ ಮಾತನಾಡಿ ರೇಷ್ಮೆ ಇಲಾಖೆಯಿಂದ ರೇಷ್ಮೆ ಬೆಳೆಗಾರರಿಗೆ ಬೆಳೆಯುವ ಸೌಲಭ್ಯಗಳ ಬಗ್ಗೆ ಸಂಪೂರ್ಣ ಮಾಹಿತಿ ನೀಡಿದರು ಒಂದು ಎಕರೆ ಹಿಪ್ಪು ನೇರಳೆ ನಾಟಿ ಮಾಡುವುದಕ್ಕೆ ವಿಬ್ ಜಿ ರಾಮ್ ಜಿ ಯೋಜನೆ ಅಡಿಯಲ್ಲಿ 50,000 ದಿಂದ 60,000 ವರೆಗೂ ಸಹಾಯಧನ ಸಿಗುತ್ತದೆ ಅದೇ ರೀತಿ ಹಿಪ್ಪು ನೇರಳೆ ತೋಟಕ್ಕೆ ಒಂದು ಎಕರೆ ವಿಸ್ತೀರ್ಣಕ್ಕೆ ಹನಿ ನೀರಾವರಿ ಅಳವಡಿಸಿಕೊಂಡರೆ 35 ರಿಂದ 40,000 ಸಹಾಯಧನ ಸಿಗುತ್ತದೆ ಎಂದರು 1000 ಚದುರು ಆಡಿ ರೇಷ್ಮೆ ಹುಳು ಸಾಗಾಣಿಕೆ ಮನೆಗೆ ಸಹಾಯಧನ 3,37,500 ಸಾಮಾನ್ಯ ವರ್ಗದ ರೈತರಿಗೆ ಎಸ್ಸಿ ಎಸ್ಟಿ ವರ್ಗದವರಿಗೆ ರೂ.405000 ಸಹಾಯಧನ ಲಭ್ಯವಿದೆ ಎಂದು ತಿಳಿಸಿದ ಅವರು ರೇಷ್ಮೆ ಹುಳು ಸಾಗಾಣಿಕೆ ಸಲಕರಣೆಗಳಾದ ಪ್ಲಾಸ್ಟಿಕ್ ಚಂದ್ರಿಕೆ ಪವರ್ ಸ್ಪೆಯರ್ ಇತರೆ ವರ್ಗದವರಿಗೆ ಶೇಕಡಾ 75 ಪರ್ಸೆಂಟ್ ಸಬ್ಸಿಡಿ ಎಸ್ಸಿ ಎಸ್ಟಿ ವರ್ಗದವರಿಗೆ 90% ಸಬ್ಸಿಡಿ ಸಿಗಲಿದೆ ಎಂದು ತಿಳಿಸಿದರು ಸದರಿ ಕಾರ್ಯಕ್ರಮದಲ್ಲಿ ರೇಷ್ಮೆ ನಿರೀಕ್ಷಕರಾದ ರಮೇಶ್ ಮಾತನಾಡಿ ಪ್ರಸ್ತುತ ಒಂದು ಕೆಜಿ ದ್ವಿತೀಯ ರೇಷ್ಮೆ ಗೂಡಿಗೆ 900 ರಿಂದ 1000 ಇರುತ್ತದೆ ಆದ್ದರಿಂದ ನೀರಾವರಿ ಸೌಲಭ್ಯ ಇರುವ ರೈತರು ರೇಷ್ಮೆ ಕೃಷಿ ಮಾಡುವುದರ ಮೂಲಕ ಸೌಲಭ್ಯವನ್ನು ಇಲಾಖೆಯಿಂದ ಪಡೆಯಬಹುದು ಇದರಿಂದ ಅವರ ಆರ್ಥಿಕ ಪರಿಸ್ಥಿತಿ ಸುಧಾರಿಸುತ್ತದೆ ಎಂದು ತಿಳಿಸಿದರು

# ಮೊದಲ ದಿನವೇ ಬರೋಬ್ಬರಿ 1.84 ಲಕ್ಷ ಗಣೇಶ ಮೂರ್ತಿ ವಿಸರ್ಜನೆ!

ಬೆಂಗಳೂರಿನಲ್ಲಿ ಗಣೇಶೋತ್ಸವದ ಮೊದಲ ದಿನವೇ ಬರೋಬ್ಬರಿ 1.84 ಲಕ್ಷಕ್ಕೂ ಹೆಚ್ಚು ಗಣಪತಿ ಮೂರ್ತಿಗಳನ್ನು ಯಶಸ್ವಿಯಾಗಿ ವಿಸರ್ಜನೆ ಮಾಡಲಾಗಿದೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯ ಪಶ್ಚಿಮ ವಲಯದಲ್ಲಿ ಅತಿ ಹೆಚ್ಚು ಅಂದರೆ 1.20 ಲಕ್ಷ ಮೂರ್ತಿಗಳು ವಿಸರ್ಜನೆಯಾಗಿದ್ದು, ಮೊಬೈಲ್ ಟ್ಯಾಂಕ್ ಹಾಗೂ ಕೆರೆ ಕಲ್ಯಾಣಿಗಳ ಮೂಲಕ ಸುಸೂತ್ರ ವ್ಯವಸ್ಥೆ ಕಲ್ಪಿಸಲಾಗಿತ್ತು. ನಗರದಲ್ಲಿ ಗಣೇಶ ಚತುರ್ಥಿ ಹಬ್ಬದ ಸಂಭ್ರಮ ಮುಗಿಲುಮುಟ್ಟಿದ್ದು, ಉತ್ಸವದ ಮೊದಲ ದಿನವೇ ನಗರದಾದ್ಯಂತ ಬರೋಬ್ಬರಿ 1,84,628 ಗಣಪತಿ ಮೂರ್ತಿಗಳನ್ನು ಭಕ್ತಿಯಿಂದ ವಿಸರ್ಜನೆ ಮಾಡಲಾಗಿದೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದ (ಜಿಬಿಎ) ವ್ಯಾಪ್ತಿಯ ಐದು ಮಹಾನಗರ ಪಾಲಿಕೆಗಳಲ್ಲಿ ಪರಿಸರ ಸ್ನೇಹಿ ಮತ್ತು ಸುರಕ್ಷಿತ ವಿಸರ್ಜನೆಗಾಗಿ ಕೈಗೊಂಡಿದ್ದ ಮುನ್ನೆಚ್ಚರಿಕಾ ಕ್ರಮಗಳು ಯಶಸ್ವಿಯಾಗಿವೆ. ಪಶ್ಚಿಮ ವಲಯದಲ್ಲೇ ಅತಿ ಹೆಚ್ಚು ಗಣಪತಿ ವಿಸರ್ಜನೆ

ಜಿಬಿಎ ಬಿಡುಗಡೆ ಮಾಡಿರುವ ಅಧಿಕೃತ ದತ್ತಾಂಶದ ಪ್ರಕಾರ, ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಅತಿ ಹೆಚ್ಚು ಅಂದರೆ 1,20,079 ಗಣೇಶ ಮೂರ್ತಿಗಳನ್ನು ವಿಸರ್ಜಿಸಲಾಗಿದೆ. ಉಳಿದಂತೆ ಸೆಂಟ್ರಲ್ ವಲಯದಲ್ಲಿ 28,860, ಉತ್ತರ ವಲಯದಲ್ಲಿ 16,857, ದಕ್ಷಿಣ ವಲಯದಲ್ಲಿ 10,372 ಹಾಗೂ ಪೂರ್ವ ವಲಯ ಪಾಲಿಕೆ ವ್ಯಾಪ್ತಿಯಲ್ಲಿ 8,460 ಮೂರ್ತಿಗಳನ್ನು ವಿಸರ್ಜಿಸಲಾಗಿದೆ. ಪಾಲಿಕೆಯು 42 ಪ್ರಮುಖ ಕೆರೆಗಳ ಆವರಣದಲ್ಲಿ ತಾತ್ಕಾಲಿಕ/ಶಾಶ್ವತ ಕಲ್ಯಾಣಿಗಳನ್ನು ಹಾಗೂ 659 ಸಂಚಾರಿ ಟ್ಯಾಂಕರ್ ವ್ಯವಸ್ಥೆಯನ್ನು ಪ್ರತಿಯೊಂದು ವಾರ್ಡ್ ಮಟ್ಟದಲ್ಲೂ ಮಾಡಿತ್ತು.

# ಶಿಕ್ಷಣದ ಮಹತ್ವ ಸಾರುವ 'ಶಾಲಾ ಮಕ್ಕಳು' ಕಲಾವಿದರೇ ರೂಪಿಸಿರುವ ಸಿನಿಮಾ ನಾಳೆ ತೆರೆಗೆ

ಸೂರ್ಯಪ್ರಗತಿನ್ಯೂಸ್.ಕಾಂ



ತುಮಕೂರು: ಸಾಕ್ಷರತಾ ಆಂದೋಲನದ ಕಲಾವಿದ ಗೆಳೆಯರ ತಂಡಒಟ್ಟಾಗಿ ಶಿಕ್ಷಣದ ಮಹತ್ವ ಸಾರುವ 'ಶಾಲಾ ಮಕ್ಕಳು' ಎಂಬ ಚಲನಚಿತ್ರ ನಿರ್ಮಾಣ ಮಾಡಿದ್ದಾರೆ. ಈ ಸಿನಿಮಾ ಈ ತಿಂಗಳ 18ರಂದು ಈ ಸಿನಿಮಾತೆರೆ ಕಾಣಲಿದೆ. ಶಾಲಾ ಮಕ್ಕಳು ಚಲನಚಿತ್ರಕ್ಕೆ ಸಾಹಿತ್ಯ, ಸಂಭಾಷಣೆ ರಚಿಸಿ ನಿರ್ಮಾಣ ಮಾಡಿರುವ ಯಲ್ಲಯ್ಯ ಅವರು ಬುಧವಾರ ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಯಾವ ಮಗುವೂ ಶಿಕ್ಷಣದಿಂದ ಹೊರಗುಳಿಯ ಬಾರದು ಎಂಬುದು ಸರ್ಕಾರದ ಆಶಯ. ಆದರೆ ಕೆಲವೊಂದು ಕುಟುಂಬಗಳ ಸಮಸ್ಯೆಗಳು ಮಕ್ಕಳ ಶಿಕ್ಷಣದ ಮೇಲೆ ದುಷ್ಪರಿಣಾಮ ಬೀರಬಹುದು ಅದರಿಂದ ಮಕ್ಕಳ ಕಲಿಕೆಗೂ ಕಷ್ಟವಾಗಬಹುದು. ಇಂತಹ ಸಂದರ್ಭದಲ್ಲಿ ಶಿಕ್ಷಕರಾದಿಯಾಗಿ ಯಾರುಯಾರಿಂದ ಮಕ್ಕಳಿಗೆ ಸಹಾಯ ಆಗಬಹುದು ಎಂಬ ವಿಷಯ ಆಧಾರಿತವಾಗಿ ಸಿನಿಮಾರೂಪಿಸಲಾಗಿದೆ ಎಂದು ಹೇಳಿದರು. ಹಿರೇಹಳ್ಳಿಯ ಸುಮತಿ ಶಾಲೆಯಲ್ಲಿ ಪ್ರಧಾನವಾಗಿ ಚಿತ್ರೀಕರಣ ಮಾಡಲಾಗಿದ್ದು, ಅಲ್ಲದೆ ಸುತ್ತಮುತ್ತಲ ಗ್ರಾಮಗಳಲ್ಲಿ ದೃಶ್ಯಾವಳಿಗಳನ್ನು ಚಿತ್ರಿಸಲಾಗಿದೆ.ಈ ತಿಂಗಳ 18ರಂದು ನಗರದ ಗಾಯತ್ರಿ ಚಿತ್ರ ಮಂದಿರದಲ್ಲಿ ಬೆಳಗಿನ ಹಾಗೂ ಮಧ್ಯಾಹ್ನದ ಆಟದಂತೆ ದಿನಕ್ಕೆ ಎರಡು ಶೋಗಳಲ್ಲಿ ಸಿನಿಮಾ ಪ್ರದರ್ಶನವಾಗಲಿದೆ ಎಂದರು.

ಚಿತ್ರ ನಿರ್ದೇಶಕ ಬಿ.ಎನ್. ಶರತ್‌ಬಾಬು ಮಾತನಾಡಿ, ಕೌಟುಂಬಿಕ ಸಮಸ್ಯೆಯು ಮಕ್ಕಳ ಶಿಕ್ಷಣಕ್ಕೆ ಹೇಗೆ ತೊಡಕಾಗುತ್ತದೆ. ಅವುಗಳನ್ನು ಯಾವರೀತಿ ಬಗೆಹರಿಸಿ ಕೊಳ್ಳಲು ಸಾಧ್ಯ, ಈ ಪ್ರಯತ್ನದಲ್ಲಿ ಮಾರ್ಗದರ್ಶನ ನೀಡುವವರು ಯಾರು ಎಂಬುದು ಚಿತ್ರದ ತಿರುಳು. ಸ್ಥಳೀಯ ಕಲಾವಿದರು ಈ ಚಿತ್ರದಲ್ಲಿ ಅಭಿನಯಿಸಿದ್ದಾರೆ. ಶಿಕ್ಷಣದ ಮಹತ್ವ ಸಾರುವ ಸಾಕ್ಷರತಾ ಆಂದೋಲನದ ಕಲಾವಿದ ಗೆಳೆಯರೆಲ್ಲಾ ಶಾಲಾ ಮಕ್ಕಳು ಚಿತ್ರ ನಿರ್ಮಾಣ ಮಾಡಿದ್ದೇವೆ ಎಂದು ಹೇಳಿದರು.

ಚಿತ್ರದಲ್ಲಿ ಅಭಿನಯಿಸಿದ ಕಲಾವಿದರಾದ ಡಿ.ಸಿ. ಕುಮಾರ್, ರಸೂಲ್ ಬೇಗ್, ನಾಗರತ್ನ, ಬಾಲ ಕಲಾವಿದರಾದ ಯಶಸ್, ಪ್ರಜ್ವಲ್, ತನುಷ್

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಸಾಂದೀಪನಿ ಶಿಷ್ಯ ವೇತನಕ್ಕೆ ಅರ್ಜಿ ಆಹ್ವಾನ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು; ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯು ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದ ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆಯಲು ಪ್ರೋತ್ಸಾಹಿಸುವ ಉದ್ದೇಶದಿಂದ ಆರ್ಥಿಕ ನೆರವು ಒದಗಿಸುವ "ಸಾಂದೀಪನಿ ಶಿಷ್ಯವೇತನ" ಯೋಜನೆಯನ್ನು ಜಾರಿಗೆ ತಂದಿದ್ದು, ಯೋಜನೆಯ ಸೌಲಭ್ಯ ಪಡೆಯಲಿಚ್ಛಿಸುವವರಿಂದ ಅರ್ಜಿ ಆಹ್ವಾನಿಸಲಾಗಿದೆ. ಈ ಯೋಜನೆಯಡಿ ಪ್ರಥಮ/ ದ್ವಿತೀಯ ಪಿಯುಸಿ ಹಾಗೂ ಸಾಮಾನ್ಯ ಪದವಿ ಕೋರ್ಸುಗಳನ್ನು ವ್ಯಾಸಂಗ ಮಾಡುತ್ತಿರುವ ಪ್ರತಿ ವಿದ್ಯಾರ್ಥಿಗೆ ವಾರ್ಷಿಕ ನಿರ್ವಹಣಾ ವೆಚ್ಚ 15,000 ರೂ.ಗಳ ಶಿಷ್ಯವೇತನ ನೀಡಲಾಗುವುದು.

CET, NEET ಸೇರಿದಂತೆ ಸಾಮಾನ್ಯ ಪ್ರವೇಶ ಪರೀಕ್ಷೆಗಳ ಮೂಲಕ ಪದವಿ ಮತ್ತು ಸ್ನಾತಕೋತ್ತರ ಪದವಿಗಳಿಗೆ ದಾಖಲಾತಿ ಪಡೆದ ವಿದ್ಯಾರ್ಥಿಗಳಿಗೆ ಪ್ರವೇಶಾತಿ ಶುಲ್ಕದ 2/3 ಭಾಗದ ಮೊತ್ತವನ್ನು ಮರುಪಾವತಿ ಮಾಡಲಾಗುವುದು.ಅರ್ಜಿ ಸಲ್ಲಿಸುವ ವಿದ್ಯಾರ್ಥಿಯು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿದ್ದು, ಬ್ರಾಹ್ಮಣ ಸಮುದಾಯದ ಸಾಮಾನ್ಯ ವರ್ಗಕ್ಕೆ ಸೇರಿದ ವಿದ್ಯಾರ್ಥಿಯಾಗಿರಬೇಕು. ಚಾಲ್ತಿಯಲ್ಲಿರುವ ಆರ್ಥಿಕವಾಗಿ ಹಿಂದುಳಿದ ಪ್ರಮಾಣಪತ್ರ(ಇಡಬ್ಲ್ಯೂಎಸ್ ಪ್ರಮಾಣ ಪತ್ರ) ಹೊಂದಿರಬೇಕು. ವೃತ್ತಿಪರ ಕೋರ್ಸುಗಳಿಗೆ ಮ್ಯಾನೇಜ್ಮೆಂಟ್ ಕೋಟಾ ಅಥವಾ ಕಾಮೆಡ್-ಕೆ ಅಡಿ ಪ್ರವೇಶಾತಿ ಪಡೆದ ವಿದ್ಯಾರ್ಥಿಗಳು ಶುಲ್ಕ ಮರುಪಾವತಿಗೆ ಅರ್ಹರಿರುವುದಿಲ್ಲ. ವಿದ್ಯಾರ್ಥಿಗಳ ಆಧಾರ್ ಸಂಖ್ಯೆಗೆ ಮೊಬೈಲ್ ಸಂಖ್ಯೆ ಲಿಂಕ್ ಆಗಿರಬೇಕು ಮತ್ತು ಬ್ಯಾಂಕ್ ಖಾತೆ ಓಕಅಖ ಅಡಿ ಸೀಡ್ ಆಗಿರಬೇಕು. ಆಸಕ್ತರು ಡಿಸೆಂಬರ್ 31ರೊಳಗಾಗಿ ಜಾಲತಾಣ www. ksbdb.Karnataka.gov.in ಮೂಲಕ ಆನ್ ಲೈನ್ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 0816-2255652 ಅಥವಾ ಸಹಾಯವಾಣಿ ಸಂಖ್ಯೆ 8029605888 / 8762249230 ಅಥವಾ ನಂ.14/3, ಅನೆಕ್ಸ್ ಕಟ್ಟಡ, 3ನೇ ಮಹಡಿ, ಶ್ರೀ ಅರವಿಂದ ಭವನ, ದಿ ಮಿಥಿಕ್ ಸೊಸೈಟಿ ಆವರಣ, ನೃಪತುಂಗ ರಸ್ತೆ, ಬೆಂಗಳೂರು-560001ನ್ನು ಸಂಪರ್ಕಿಸಬಹುದಾಗಿದೆ.

